# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 72 (43) |
| **ಮಾನ್ಯ ಸದಸ್ಯರ ಹೆಸರು** | ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| **ಉತ್ತರಿಸುವ ಸಚಿವರು** | ಉನ್ನತ ಶಿಕ್ಷಣ ಸಚಿವರು |
| **ಉತ್ತರಿಸಬೇಕಾದ ದಿನಾಂಕ** | 17.08.2026 |

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸಾರ್ವಜನಿಕ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಮಂಜೂರಾಗಿರುವ, ಸೃಜನೆಯಾಗಿರುವ ಹಾಗೂ ಪ್ರಸ್ತುತ ಖಾಲಿಯಿರುವ ಒಟ್ಟು ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು? (ವಿಶ್ವವಿದ್ಯಾಲಯವಾರು ಸಂಪೂರ್ಣ ಮಾಹಿತಿ ನೀಡುವುದು); | ಉನ್ನತ ಶಿಕ್ಷಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸಾರ್ವಜನಿಕ ವಿಶ್ವವಿದ್ಯಾಲಯಗಳ ಮಾಹಿತಿಯನ್ನು **ಅನುಬಂಧ-1**ರಲ್ಲಿರಿಸಿದೆ.<br><br>ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾಗಿರುವ, ಭರ್ತಿಯಾಗಿರುವ ಹಾಗೂ ಪ್ರಸ್ತುತ ಖಾಲಿ ಇರುವ ಬೋಧಕ ಹುದ್ದೆಗಳ ವಿವರಗಳನ್ನು **ಅನುಬಂಧ-2**ರಲ್ಲಿ ಮತ್ತು ಬೋಧಕೇತರ ಹುದ್ದೆಗಳ ವಿವರವನ್ನು **ಅನುಬಂಧ-3**ರಲ್ಲಿ ನೀಡಲಾಗಿದೆ. |
| ಆ) | ಬೋಧಕ ಮತ್ತು ಬೋಧಕೇತರ ಹುದ್ದೆಗಳು ಬೃಹತ್ ಪ್ರಮಾಣದಲ್ಲಿ ಖಾಲಿ ಇರುವುದರಿಂದ ವಿಶ್ವವಿದ್ಯಾಲಯಗಳಲ್ಲಿ ಶಿಕ್ಷಣದ ಗುಣಮಟ್ಟ ಮತ್ತು ಆಡಳಿತಾತ್ಮಕ ಕಾರ್ಯಗಳಿಗೆ ಹಿನ್ನಡೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಾರ್ವಜನಿಕ ವಿಶ್ವವಿದ್ಯಾಲಯದಲ್ಲಿ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನದಲ್ಲಿದ್ದು, ಈ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲು ಅನುವಾಗುವಂತೆ The Statutes Relating to Appointment and Promotion of Teachers and Other Academic Staff and Measures for the Maintenance of Standards in Higher Education as per The UGC Regulations 2018ನ್ನು ಘನತೆವೆತ್ತ ಕುಲಾಧಿಪತಿಗಳ ಅನುಮೋದನೆಯೊಂದಿಗೆ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಿಗೆ ಏಕರೂಪ ಮಾದರಿ ಪರಿನಿಯಮಗಳನ್ನು ರಚಿಸಲಾಗಿರುತ್ತದೆ. ಬೋಧಕೇತರ ಹುದ್ದೆಗಳಿಗೆ ಸಂಬಂಧಿಸಿದಂತೆ ವಿಶ್ವವಿದ್ಯಾಲಯಗಳು ರಚಿಸಿಕೊಂಡಿರುವ ಪರಿನಿಯಮಗಳನ್ವಯ ನೇಮಕಾತಿ ಮಾಡಿಕೊಳ್ಳಲು ಕ್ರಮವಹಿಸಬೇಕಾಗಿರುತ್ತದೆ.<br><br>ಮುಂದುವರೆದು, 2026-27ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-121ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿರುತ್ತದೆ.<br><br>**"ಸಾರ್ವಜನಿಕ ವಿಶ್ವವಿದ್ಯಾಲಯಗಳಲಿ 1000 ಬೋಧಕ ಹುದ್ದೆಗಳನ್ನು ತರ್ಕಬದ್ಧಗೊಳಿಸಿ ಹಂತಹಂತವಾಗಿ ಭರ್ತಿ ಮಾಡಲಾಗುವುದು".**<br><br>ಆಯವ್ಯಯ ಭಾಷಣ ಕಂಡಿಕೆಯನ್ವಯ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕಾರ್ಯಭಾರದ ಮಾಹಿತಿಯೊಂದಿಗೆ ಅವಶ್ಯಕವಾಗಿ ಭರ್ತಿ ಮಾಡಬೇಕಾಗಿರುವ ಖಾಲಿ ಹುದ್ದೆಗಳನ್ನು ಗುರುತಿಸಿ ಪ್ರಸ್ತಾವನೆ ಸಲ್ಲಿಸುವಂತೆ ರಾಜ್ಯದ |
| ಇ) | ಬಂದಿದ್ದಲ್ಲಿ, ಖಾಲಿಯಿರುವ ಈ ಹುದ್ದೆಗಳನ್ನು ಹಂತ ಹಂತವಾಗಿ ಅಥವಾ ನೇಮಕಾತಿ ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ನೇಮಕಾತಿ ಅಧಿಸೂಚನೆ ಹೊರಡಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು; ಯಾವ ಕಾಲಮಿತಿಯೊಳಗೆ ಈ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲಾಗುವುದು; | |
| ಈ) | ಖಾಯಂ ಹುದ್ದೆಗಳ ಭರ್ತಿಯಾಗುವವರೆಗೆ ಶೈಕ್ಷಣಿಕ ಹಿತದೃಷ್ಟಿಯಿಂದ ನೇಮಕ ಮಾಡಿಕೊಳ್ಳಲಾಗಿರುವ ಅತಿಥಿ ಉಪನ್ಯಾಸಕರ ಹಾಗೂ ಹೊರಗುತ್ತಿಗೆ ಆಧಾರದ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಮತ್ತು ಇವರಿಗೆ ಒದಗಿಸುತ್ತಿರುವ ಸೌಲಭ್ಯಗಳು ಯಾವುವು? | |

| | | |
|---|---|---|
| | | 32 ಸಾರ್ವಜನಿಕ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ ನಿರ್ದೇಶನ ನೀಡಲಾಗಿರುತ್ತದೆ.<br><br>ಅದರಂತೆ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಅವಶ್ಯಕವಾಗಿ ಬೇಕಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. ವಿಶ್ವವಿದ್ಯಾಲಯಗಳಿಂದ ಸ್ವೀಕೃತವಾಗಿರುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. ಈ ಪ್ರಸ್ತಾವನೆಗಳಿಗೆ ಸಂಬಂಧಿಸಿದಂತೆ ಸರ್ಕಾರದ ಹಂತದಲ್ಲಿ ನಿರ್ಣಯ ಕೈಗೊಂಡ ನಂತರ ವಿಶ್ವವಿದ್ಯಾಲಯಗಳಿಗೆ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ನಿರ್ದೇಶನ ನೀಡಲಾಗುವುದು.<br><br>ಮುಂದುವರೆದು, ಖಾಯಂ ಹುದ್ದೆಗಳ ಭರ್ತಿಯಾಗುವವರೆಗೆ ಶೈಕ್ಷಣಿಕ ಹಿತದೃಷ್ಟಿಯಿಂದ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯ ಅಧಿನಿಯಮ 2000ರ ಪ್ರಕರಣ 55 ಮತ್ತು 56ರಲ್ಲಿ ಪದತ್ತವಾದ ಅಧಿಕಾರದನ್ವಯ ವಿಶ್ವವಿದ್ಯಾಲಯದ ಕುಲಪತಿಗಳು ವಿಶ್ವವಿದ್ಯಾಲಯಕ್ಕೆ ಸರ್ಕಾರದಿಂದ ಮಂಜೂರಾದ ಹುದ್ದೆಗಳಿಗೆ ಎದುರಾಗಿ ಅತಿಥಿ ಉಪನ್ಯಾಸಕರ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಬೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡು ವಿಶ್ವವಿದ್ಯಾಲಯದ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ.<br><br>ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ನೇಮಕ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರ ಮತ್ತು ಬೋಧಕೇತರ ಸಿಬ್ಬಂದಿಗಳ ವಿವರಗಳನ್ನು **ಅನುಬಂಧ-4**ರಲ್ಲಿ ನೀಡಲಾಗಿದೆ.<br><br>ಯುಜಿಸಿಯು ದಿನಾಂಕ:28.01.219ರಂದು ಹೊರಡಿಸಿರುವ ಮಾರ್ಗಸೂಚಿಯಲ್ಲಿ ಪ್ರತಿ ಉಪನ್ಯಾಸಕ್ಕೆ ರೂ.1,500/-ರಂತೆ ತಿಂಗಳಿಗೆ ಗರಿಷ್ಠ ರೂ.50,000/- ಮೀರದಂತೆ ಗೌರವಧನವನ್ನು ನಿಗದಿಪಡಿಸಿದೆ.<br><br>ಈ ಮಾರ್ಗಸೂಚಿಯನ್ವಯ ಸಾರ್ವಜನಿಕ ವಿಶ್ವವಿದ್ಯಾಲಯಗಳು ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ವಿದ್ಯಾರ್ಹತೆ ಹಾಗೂ ಕಾರ್ಯಭಾರಕ್ಕನುಗುಣವಾಗಿ ತಮ್ಮ ಆಂತರಿಕ ಸಂಪನ್ಮೂಲದ ಲಭ್ಯತೆಗನುಗುಣವಾಗಿ ಪಾವತಿಸಲಾಗುತ್ತಿದೆ. |

**ಸಂಖ್ಯೆ**: ಇಡಿ 176 ಯುಎನ್ಇ 2026

**(ಬಸವರಾಜ ರಾಯರಡ್ಡಿ)**
ಉನ್ನತ ಶಿಕ್ಷಣ ಸಚಿವರು

**ಅನುಬಂಧ-1**

**ಉನ್ನತ ಶಿಕ್ಷಣ ಇಲಾಖೆಯಡಿ ಒಟ್ಟು 32 ಸಾರ್ವಜನಿಕ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ಕೆಳಗಿನಂತಿವೆ.**

| ಕ್ರ. ಸಂ | ಸಾರ್ವಜನಿಕ ವಿಶ್ವವಿದ್ಯಾಲಯಗಳ ಹೆಸರು |
|---|---|
| 1. | ಮೈಸೂರು ವಿಶ್ವವಿದ್ಯಾಲಯ |
| 2. | ಮಂಡ್ಯ ವಿಶ್ವವಿದ್ಯಾಲಯ |
| 3. | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ |
| 4. | ಗುಲ್ಬರ್ಗಾ ವಿಶ್ವವಿದ್ಯಾಲಯ |
| 5. | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ |
| 6. | ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ |
| 7. | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ |
| 8. | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ |
| 9. | ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ |
| 10. | ಕುವೆಂಪು ವಿಶ್ವವಿದ್ಯಾಲಯ |
| 11. | ದಾವಣಗೆರೆ ವಿಶ್ವವಿದ್ಯಾಲಯ |
| 12. | ಮಂಗಳೂರು ವಿಶ್ವವಿದ್ಯಾಲಯ |
| 13. | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ |
| 14. | ಕನ್ನಡ ವಿಶ್ವವಿದ್ಯಾಲಯ, ಹಂಪಿ |
| 15. | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. |
| 16. | ಕರ್ನಾಟಕ ರಾಜ್ಯ ಅಕ್ಕಮಹಾ ದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ |
| 17. | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ |
| 18. | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು |
| 19. | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು |
| 20. | ತುಮಕೂರು ವಿಶ್ವವಿದ್ಯಾಲಯ, ತುಮಕೂರು |
| 21. | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ. |

| | |
|---|---|
| 22. | ಡಾ. ಬಿ.ಆರ್. ಅಂಬೇಡ್ಕರ್ ವಿಶ್ವವಿದ್ಯಾಲಯ, ಬೆಂಗಳೂರು. |
| 23. | ನೃಪತುಂಗ ವಿಶ್ವವಿದ್ಯಾಲಯ |
| 24. | ಹಾಸನ ವಿಶ್ವವಿದ್ಯಾಲಯ |
| 25. | ಚಾಮರಾಜನಗರ ವಿಶ್ವವಿದ್ಯಾಲಯ |
| 26. | ಬೀದರ್ ವಿಶ್ವವಿದ್ಯಾಲಯ |
| 27. | ಕೊಪ್ಪಳ ವಿಶ್ವವಿದ್ಯಾಲಯ |
| 28. | ಕೊಡಗು ವಿಶ್ವವಿದ್ಯಾಲಯ |
| 29. | ಬಾಗಲಕೋಟ ವಿಶ್ವವಿದ್ಯಾಲಯ ಜಮಖಂಡಿ |
| 30. | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ |
| 31. | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ |
| 32. | ಯುವಿಸಿಇ ವಿಶ್ವವಿದ್ಯಾಲಯ |

<u>ಅನುಬಂಧ-2</u>

**ಬೋಧಕ ಹುದ್ದೆಗಳು:**

| ಕ್ರ. ಸಂ. | ವಿಶ್ವವಿದ್ಯಾಲಯದ ಹೆಸರು | ಅನುಮೋದನೆ ಗೊಂಡಿರುವ/ ಮಂಜೂರಾದ ಹುದ್ದೆಗಳು | ನೇಮಕಗೊಂಡಿರುವ ಹುದ್ದೆಗಳ ವಿವರ | ಖಾಲಿ ಹುದ್ದೆಗಳು |
|---|---|---|---|---|
| 01 | ಮೈಸೂರು ವಿಶ್ವವಿದ್ಯಾಲಯ | 571 | 180 | 391 |
| 02 | ಮಂಡ್ಯ ವಿಶ್ವವಿದ್ಯಾಲಯ | 92 | 0 | 92 |
| 03 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ | 133 | 68 | 65 |
| 04 | ಗುಲ್ಬರ್ಗಾ ವಿಶ್ವವಿದ್ಯಾಲಯ | 206 | 35 | 171 |
| 05 | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ | 31 | 31 | 0 |
| 06 | ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ | 139 | 84 | 55 |
| 07 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ | 71 | 38 | 33 |
| 08 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ | 21 | 08 | 13 |
| 09 | ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ | 15 | 0 | 15 |
| 10 | ಕುವೆಂಪು ವಿಶ್ವವಿದ್ಯಾಲಯ | 224 | 142 | 82 |
| 11 | ದಾವಣಗೆರೆ ವಿಶ್ವವಿದ್ಯಾಲಯ | 164 | 131 | 33 |
| 12 | ಮಂಗಳೂರು ವಿಶ್ವವಿದ್ಯಾಲಯ | 273 | 123 | 150 |
| 13 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ | 272 | 0 | 272 |
| 14 | ಕನ್ನಡ ವಿಶ್ವವಿದ್ಯಾಲಯ, ಹಂಪಿ | 73 | 36 | 37 |
| 15 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. | 140 | 82 | 58 |
| 16 | ಕರ್ನಾಟಕ ರಾಜ್ಯ ಅಕ್ಕಮಹಾ ದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 103 | 58 | 45 |
| 17 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 620 | 198 | 422 |
| 18 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 365 | 120 | 245 |
| 19 | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು | 161 | 10 | 151 |

| | | | | |
|---|---|---|---|---|
| 20 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 223 | 120 | 103 |
| 21 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ. | 66 | 04 | 62 |
| 22 | ಡಾ. ಬಿ.ಆರ್. ಅಂಬೇಡ್ಕರ್ ವಿಶ್ವವಿದ್ಯಾಲಯ, ಬೆಂಗಳೂರು. | 17 | 0 | 17 |
| 23 | ನೃಪತುಂಗ ವಿಶ್ವವಿದ್ಯಾಲಯ | 100 | 0 | 100 |
| 24 | ಹಾಸನ ವಿಶ್ವವಿದ್ಯಾಲಯ | 27 | 0 | 27 |
| 25 | ಚಾಮರಾಜನಗರ ವಿಶ್ವವಿದ್ಯಾಲಯ | 36 | 0 | 36 |
| 26 | ಬೀದರ್ ವಿಶ್ವವಿದ್ಯಾಲಯ | 29 | 0 | 29 |
| 27 | ಕೊಪ್ಪಳ ವಿಶ್ವವಿದ್ಯಾಲಯ | 12 | 0 | 12 |
| 28 | ಕೊಡಗು ವಿಶ್ವವಿದ್ಯಾಲಯ | 80 | 0 | 80 |
| 29 | ಬಾಗಲಕೋಟ ವಿಶ್ವವಿದ್ಯಾಲಯ ಜಮಖಂಡಿ | 12 | 0 | 12 |
| 30 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | 59 | 35 | 24 |
| 31 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ | 228 | 136 | 92 |
| 32 | ಯುವಿಸಿಇ ವಿಶ್ವವಿದ್ಯಾಲಯ | 139 | 65 | 74 |
| | **ಒಟ್ಟು** | **4702** | **1705** | **2997** |

## ಅನುಬಂಧ-3

**ಬೋಧಕೇತರ ಹುದ್ದೆಗಳು:**

| ಕ್ರ. ಸಂ | ವಿಶ್ವವಿದ್ಯಾಲಯದ ಹೆಸರು | ಅನುಮೋದನೆಗೊಂಡಿರುವ/ ಮಂಜೂರಾದ ಹುದ್ದೆಗಳು | ನೇಮಕಗೊಂಡಿರುವ ಹುದ್ದೆಗಳ ವಿವರ | ಖಾಲಿ ಹುದ್ದೆಗಳು |
|---|---|---|---|---|
| 01 | ಮೈಸೂರು ವಿಶ್ವವಿದ್ಯಾಲಯ | 799 | 403 | 396 |
| 02 | ಮಂಡ್ಯ ವಿಶ್ವವಿದ್ಯಾಲಯ | 253 | 00 | 253 |
| 03 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ | 575 | 265 | 310 |
| 04 | ಗುಲ್ಬರ್ಗಾ ವಿಶ್ವವಿದ್ಯಾಲಯ | 433 | 155 | 278 |
| 05 | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ | 268 | 99 | 169 |
| 06 | ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ | 102 | 30 | 72 |
| 07 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ | 62 | 38 | 24 |
| 08 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ | 35 | 17 | 18 |
| 09 | ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ | 19 | 00 | 19 |
| 10 | ಕುವೆಂಪು ವಿಶ್ವವಿದ್ಯಾಲಯ | 591 | 225 | 366 |
| 11 | ದಾವಣಗೆರೆ ವಿಶ್ವವಿದ್ಯಾಲಯ | 178 | 37 | 141 |
| 12 | ಮಂಗಳೂರು ವಿಶ್ವವಿದ್ಯಾಲಯ | 547 | 173 | 374 |
| 13 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ | 168 | 00 | 168 |
| 14 | ಕನ್ನಡ ವಿಶ್ವವಿದ್ಯಾಲಯ, ಹಂಪಿ | 234 | 138 | 96 |
| 15 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. | 246 | 124 | 122 |
| 16 | ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 173 | 10 | 163 |
| 17 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 1201 | 341 | 860 |
| 18 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 1176 | 377 | 799 |

| | | | | |
|---|---|---|---|---|
| 19 | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು | 123 | 06 | 117 |
| 20 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 214 | 46 | 168 |
| 21 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ. | 96 | 06 | 90 |
| 22 | ಡಾ. ಬಿ.ಆರ್. ಅಂಬೇಡ್ಕರ್ ವಿಶ್ವವಿದ್ಯಾಲಯ, ಬೆಂಗಳೂರು. | 49 | 00 | 49 |
| 23 | ನೃಪತುಂಗ ವಿಶ್ವವಿದ್ಯಾಲಯ | 43 | 00 | 43 |
| 24 | ಹಾಸನ ವಿಶ್ವವಿದ್ಯಾಲಯ | 245 | 00 | 245 |
| 25 | ಚಾಮರಾಜನಗರ ವಿಶ್ವವಿದ್ಯಾಲಯ | 90 | 00 | 90 |
| 26 | ಬೀದರ್ ವಿಶ್ವವಿದ್ಯಾಲಯ | 108 | 00 | 108 |
| 27 | ಕೊಪ್ಪಳ ವಿಶ್ವವಿದ್ಯಾಲಯ | 34 | 00 | 34 |
| 28 | ಕೊಡಗು ವಿಶ್ವವಿದ್ಯಾಲಯ | 108 | 00 | 108 |
| 29 | ಬಾಗಲಕೋಟ ವಿಶ್ವವಿದ್ಯಾಲಯ ಜಮಖಂಡಿ | 51 | 00 | 51 |
| 30 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | 167 | 00 | 167 |
| 31 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ | 425 | 295 | 130 |
| 32 | ಯುವಿಸಿಇ ವಿಶ್ವವಿದ್ಯಾಲಯ | 294 | 27 | 267 |
| | **ಒಟ್ಟು** | **9107** | **2812** | **6295** |

## ಅನುಬಂಧ-4

### ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ನೇಮಕಗೊಂಡಿರುವ ಅತಿಥಿ ಉಪನ್ಯಾಸಕರು ಮತ್ತು ಬೋಧಕೇತರ ಸಿಬ್ಬಂದಿಗಳ ವಿವರ

| ಕ್ರ. ಸಂ. | ವಿಶ್ವವಿದ್ಯಾಲಯದ ಹೆಸರು | ನೇಮಕಗೊಂಡಿರುವ ಅತಿಥಿ ಉಪನ್ಯಾಸಕರು | ನೇಮಕಗೊಂಡಿರುವ ಬೋಧಕೇತರ ಹುದ್ದೆಗಳ ವಿವರ |
|---|---|---|---|
| 01 | ಮೈಸೂರು ವಿಶ್ವವಿದ್ಯಾಲಯ | 510 | 357 |
| 02 | ಮಂಡ್ಯ ವಿಶ್ವವಿದ್ಯಾಲಯ | 140 | - |
| 03 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ | 02 | - |
| 04 | ಗುಲ್ಬರ್ಗಾ ವಿಶ್ವವಿದ್ಯಾಲಯ | 161 | 37 |
| 05 | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ | 75 | - |
| 06 | ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ | 68 | 30 |
| 07 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ | 13 | 35 |
| 08 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ | 40 | 17 |
| 09 | ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ | 18 | - |
| 10 | ಕುವೆಂಪು ವಿಶ್ವವಿದ್ಯಾಲಯ | 374 | 292 |
| 11 | ದಾವಣಗೆರೆ ವಿಶ್ವವಿದ್ಯಾಲಯ | 84 | 29 |
| 12 | ಮಂಗಳೂರು ವಿಶ್ವವಿದ್ಯಾಲಯ | 225 | 177 |
| 13 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ | 103 | |
| 14 | ಕನ್ನಡ ವಿಶ್ವವಿದ್ಯಾಲಯ, ಹಂಪಿ | 13 | 140 |
| 15 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. | 46 | 142 |
| 16 | ಕರ್ನಾಟಕ ರಾಜ್ಯ ಅಕ್ಕಮಹಾ ದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 164 | 10 |
| 17 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 361 | - |
| 18 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 250 | 367 |
| 19 | ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು | 151 | 08 |
| 20 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 284 | 49 |
| 21 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ. | 61 | 03 |
| 22 | ಡಾ. ಬಿ.ಆರ್. ಅಂಬೇಡ್ಕರ್ ವಿಶ್ವವಿದ್ಯಾಲಯ, ಬೆಂಗಳೂರು. | 00 | - |
| 23 | ನೃಪತುಂಗ ವಿಶ್ವವಿದ್ಯಾಲಯ | 77 | - |

| | | | |
|---|---|---|---|
| 24 | ಹಾಸನ ವಿಶ್ವವಿದ್ಯಾಲಯ | 74 | - |
| 25 | ಚಾಮರಾಜನಗರ ವಿಶ್ವವಿದ್ಯಾಲಯ | 59 | - |
| 26 | ಬೀದರ್ ವಿಶ್ವವಿದ್ಯಾಲಯ | 72 | - |
| 27 | ಕೊಪ್ಪಳ ವಿಶ್ವವಿದ್ಯಾಲಯ | 56 | - |
| 28 | ಕೊಡಗು ವಿಶ್ವವಿದ್ಯಾಲಯ | 59 | - |
| 29 | ಬಾಗಲಕೋಟ ವಿಶ್ವವಿದ್ಯಾಲಯ ಜಮಖಂಡಿ | 22 | - |
| 30 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | 20 | - |
| 31 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ | 139 | - |
| 32 | ಯುವಿಸಿಇ ವಿಶ್ವವಿದ್ಯಾಲಯ | 51 | - |
| | **ಒಟ್ಟು** | **3,772** | **1,693** |